**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2015-16ನೇ ಸಾಲಿನಲ್ಲಿ ಕೆರೆಗಳ ಪುನರ್‌ಸ್ಥಿತಿ ಹಾಗೂ ಪುನಶ್ಚೇತನ ಯೋಜನೆಯಡಿ ಜಿ.ಪಂ. ಕೆರೆಗಳಿಗಾಗಿ ಲೆಕ್ಕಶೀರ್ಷಿಕೆ:2702-01-101-0-73-059 ರಡಿ ಸೀಮಿತ ಜಿ.ಪಂ.ಗಳಿಗೆ ಅನುದಾನ ಹಂಚಿಕೆ ಮಾಡಿ ಬಿಡುಗಡೆ ಮಾಡಿ ಬಾಕಿ ಉಳಿದ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ;45/2:ಆರ್‌ಆರ್‌ಸಿ: 2015, ದಿ:15.09.2015.
2. ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಕಂಡಿಕೆ ಸಂಖ್ಯೆ: ಗ್ರಾಅಪ: 632:ಪಿಬಿಎಸ್:2015 ದಿನಾಂಕ:20.10.2015
3. ಆಂತರಿಕ ಆರ್ಥಿಕ ಸಲಹೆಗಾರರ ಕಂಡಿಕೆ ಟಿಪ್ಪಣಿ ಸಂಖ್ಯೆ:ಗ್ರಾಅಪ:663: ಆಂಆಸ:2015, ದಿನಾಂಕ: 28.10.2015.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ;45/3:ಆರ್‌ಆರ್‌ಸಿ: 2015, ದಿ:5.11.2015
5. ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂ:ಆಇ/331/ವೆಚ್ಚ-6/2016 ದಿ:24-9-2016 ಮತ್ತು ದಿ:10-2-2017

**ಪ್ರಸ್ತಾವನೆ:**

ಪ್ರಸಕ್ತ 2015-16ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕೆರೆಗಳ ಪುನರ್ ಸ್ಥಿತಿ ಹಾಗೂ ಪುನಶ್ಚೇತನ ಯೋಜನೆಯಡಿ ಜಿಲ್ಲಾ ಪಂಚಾಯತ್ ಕೆರೆಗಳಿಗಾಗಿ ಲೆ.ಶೀ.2702-01-101-0-73-059ರಡಿ ರೂ.17.00ಕೋಟಿಗಳ ಅನುದಾನವನ್ನು ಕೆಲವು ಜಿಲ್ಲೆಗಳ ತಾಲ್ಲೂಕುಗಳಿಗೆ ಸೀಮಿತಗೊಳಿಸಿ ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ಧಿಗಾಗಿ ಹಂಚಿಕೆ ಮಾಡಿ ಮೇಲೆ ಓದಲಾದ-1ರಲ್ಲಿ ಆದೇಶ ಹೊರಡಿಸಲಾಗಿದೆ. ಸದರಿ ಪೂರ್ಣಗೊಂಡ ಕಾಮಗಾರಿಗಳ ಬಾಕಿ ಬಿಲ್ ಪಾವತಿಸಲು 2015-16ನೇ ಸಾಲಿನಲ್ಲಿ ರೂ.8.50 ಕೋಟಿಗಳನ್ನು ಮೇಲೆ ಓದಲಾದ -4ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ ಈ ಕಾರ್ಯಕ್ರಮದಡಿ ಲೆಕ್ಕ ಶೀರ್ಷಿಕೆ:2702ರ್ಡಿ ಕೆರೆಗಳ ಪುನಶ್ಚೇತನ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಿದ ಕಾಮಗಾರಿಗಳ ಬಾಕಿ ಬಿಲ್ಲುಗಳ ಪಾವತಿಯನ್ನು 2016-17ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:4702-00-101-1-14ರಡಿ ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:79/20:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:17-2-2017.**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಸ್ತುತ 2015-16ನೇ ಸಾಲಿಗಾಗಿ ಜಿ.ಪಂ. ಕೆರೆಗಳ ಪುನರ್‌ಸ್ಥಿತಿ ಮತ್ತು ಪುನಶ್ಚೇತನ ಲೆ.ಶೀ. 2702-01-101-0-73-059ರಡಿ ಕೆಳಕಂಡ ಜಿಲ್ಲಾ ಪಂಚಾಯತಿಗಳಲ್ಲಿ ಕೆರೆ ಕಾಮಗಾರಿಗಳಿಗಾಗಿ ಅನುಮೋದನೆ ನೀಡಿ ಕೈಗೊಂಡು ಪೂರ್ಣಗೊಳಿಸಿದ ಕೆರೆ ಕಾಮಗಾರಿಗಳ ಬಾಕಿ ಬಿಲ್ ಪಾವತಿ ಮಾಡಲು ಲೆಕ್ಕ ಶೀರ್ಷಿಕೆ:4702-00-101-1-14-132ರಡಿ **ರೂ.425.00 ಲಕ್ಷಗಳನ್ನು** (ರೂಪಾಯಿಗಳು ನಾಲ್ಕುನೂರ ಇಪ್ಪತ್ತೈದು ಲಕ್ಷಗಳು ಮಾತ್ರ) ಈ ಕೆಳಕಂಡ ಜಿಲ್ಲಾ ಪಂಚಾಯಿತಿಗಳಿಗೆ ಷರತ್ತುಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ಹಂಚಿಕೆ ಮಾಡಿದ ಅನುದಾನ | ಈಗಾಗಲೇ ಬಿಡುಗಡೆ ಮಾಡಿರುವ ಅನುದಾನ |
|---|---|---|---|---|
| 1 | ಗುಲ್ಬರ್ಗ | ಚಿಂಚೋಳಿ | 150.00 | 75.00 |
| 2 | ಚಿಕ್ಕಬಳ್ಳಾಪುರ | ಬಾಗೇಪಲ್ಲಿ | 150.00 | 75.00 |
| 3 | ತುಮಕೂರು | ಮಧುಗಿರಿ | 150.00 | 75.00 |
| 4 | ಚಿತ್ರದುರ್ಗ | ಹೊಸದುರ್ಗ | 150.00 | 75.00 |
| 5 | ಹಾವೇರಿ | ಹಾವೇರಿ | 150.00 | 75.00 |
| | | ರಾಣಿಬೆನ್ನೂರು | 100.00 | 50.00 |
| **ಒಟ್ಟು** | | | **850.00** | **425.00** |

**ಷರತ್ತುಗಳು:**

1. ಜಿಲ್ಲಾ ಪಂಚಾಯತಿಗಳು, ಬಿಡುಗಡೆ ಮಾಡಿರುವ ಅನುದಾನವನ್ನು ಇದೇ ಲೆಕ್ಕಶೀರ್ಷಿಕೆಯಡಿ ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿ ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ವಿನಿಯೋಗಿಸಬಹುದು.
2. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ವಿಳಂಭಕ್ಕೆ ಆಸ್ಪದವಿಲ್ಲದೆ ತಕ್ಷಣವೇ ಅನುಷ್ಟಾನಾಧಿಕಾರಿಗಳಿಗೆ ಬಿಡುಗಡೆಗೊಳಿಸತಕ್ಕದ್ದು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಈ ಯೋಜನೆಯ ಎಲ್ಲಾ ಅನುಮೋದಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಷ್ಟಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಅನುಷ್ಟಾನಗೊಂಡ ಕಾಮಗಾರಿಗಳ ಪ್ರಗತಿಯ ವರದಿಯನ್ನು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡತಕ್ಕದ್ದು.
4. ಜಿಲ್ಲಾ ಪಂಚಾಯತಿಗಳು ಮುಂದಿನ ಕಂತಿನ ಅನುದಾನ ಬಿಡುಗಡೆ ಮಾಡುವ ಮುನ್ನ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಶೇ.75ರಷ್ಟು ವೆಚ್ಚ ಕಡ್ಡಾಯವಾಗಿ ಭರಿಸತಕ್ಕದ್ದು. ಇಲ್ಲದಿದ್ದಲ್ಲಿ ಮುಂದಿನ ಕಂತಿನ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲ.
5. ಪ್ರಸ್ತುತ ಈ ಲೆಕ್ಕಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿಗಳು ಅನುಷ್ಠಾನಗೊಳಿಸಿರುವ ಕಾಮಗಾರಿಗಳನ್ನು worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು worksoft website ನಲ್ಲಿ ತಪ್ಪದೆ ಅಳವಡಿಸತಕ್ಕದ್ದು.
6. ಈ ಆದೇಶದಂತೆ ಜಿಲ್ಲಾ ಪಂಚಾಯತಿಗಳು ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.
7. 2014-15ನೇ ಸಾಲಿನಿಂದ ಇಲಾಖೆಯಿಂದ ಅನುಷ್ಠಾನಗೊಳ್ಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ. ಅದರಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ

ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೆ ಒಳಪಡಿಸಿದೆ.

8. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ/53/ಬಿಆರ್‌ಎಸ್/16 ದಿ:24-9-2016ರನ್ವಯ ಹಾಗೂ ಕಂಡಿಕೆ ಟಿಪ್ಪಣಿ ಸಂ:ಆಇ/331/ವೆಚ್ಚ-6/2016 ದಿ:24-9-2016 ಮತ್ತು ದಿ:10-2-2017ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್=1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್=2) ಕರ್ನಾಟಕ, ಬೆಂಗಳೂರು
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
6. ಸರ್ಕಾರದ ಪ್ರದಾನ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಜಿಲ್ಲಾ ಖಜಾನಾಧಿಕಾರಿಗಳು, ಕಲಬುರಗಿ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ಹಾವೇರಿ.
14. ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ, ಆರ್ಥಿಕ ಇಲಾಖೆ, ಬೆಂಗಳೂರು.
15. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.-9.

16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕಲಬುರಗಿ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ಹಾವೇರಿ.
17. ಅಧೀಕ್ಷಕ ಅಭಿಯಂತರರು, ಪಂಚಾಯತ್ ಇಂಜಿನಿಯರಿಂಗ್ ವೃತ್ತ ಧಾರವಾಡ, ಕಲಬುರಗಿ, ಬೆಂಗಳೂರು, ದಾವಣಗೆರೆ.
18. ಕಾರ್ಯಪಾಲಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕಲಬುರಗಿ, ಚಿಕ್ಕಬಳ್ಳಾಪುರ, ಮಧುಗಿರಿ, ಚಿತ್ರದುರ್ಗ ಮತ್ತು ಹಾವೇರಿ.
19. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.